**Akashvani : Bangalore**
**National Bulletin In Kannada**
**30.03.2025 / 7.35 am**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

**30.03.2025 / 7.35 am**

**<><*<><>*><>**

<u>ಮುಖ್ಯಾಂಶಗಳು</u>

೧. ಇಂದು ವಿಶ್ವಾವಸು ಸಂವತ್ಸರ ಯುಗಾದಿ; ದೇಶಾದ್ಯಂತ ಸಡಗರ-ಸಂಭ್ರಮದಿಂದ ನವ ಸಂವತ್ಸರ ಆಚರಣೆ; ಗಣ್ಯರಿಂದ ಶುಭಾಶಯ

೨. 'ಮನ್ ಕಿ ಬಾತ್' ನ ೧೨೦ನೇ ಆವೃತ್ತಿಯಲ್ಲಿಂದು ಪ್ರಧಾನಿ ನರೇಂದ್ರ ಮೋದಿ ಮನದ ಮಾತು

೩. ಇಂದು ಮಹಾರಾಷ್ಟ್ರ ಮತ್ತು ಛತ್ತೀಸ್‌ಗಢದಲ್ಲಿ ಹಲವು ಯೋಜನೆಗಳಿಗೆ ಪ್ರಧಾನಿ ಚಾಲನೆ

೪. 'ಆಪರೇಷನ್ ಬ್ರಹ್ಮ' ಕಾರ್ಯಾಚರಣೆ; ಭೂಕಂಪ ಪೀಡಿತ ಮ್ಯಾನ್ಮಾರ್‌ಗೆ ಪರಿಹಾರ ಸಾಮಾಗ್ರಿಗಳನ್ನು ಹೊತ್ತೊಯ್ದ ಭಾರತೀಯ ವಾಯುಪಡೆಯ ಐದು ವಿಮಾನಗಳು

೫. ಐಪಿಎಲ್ ಟಿ-೨೦ ಕ್ರಿಕೆಟ್; ಮುಂಬೈ ಇಂಡಿಯನ್ಸ್ ವಿರುದ್ಧ ಗುಜರಾತ್ ಟೈಟಾನ್ಸ್‌ಗೆ ೩೬ ರನ್‌ಗಳ ಜಯ

**<><*<><>*><>**

ಇಂದು ವಿಶ್ವಾವಸು ಸಂವತ್ಸರದ ಯುಗಾದಿ. ದೇಶಾದ್ಯಂತ ಜನರು ಸಡಗರ-ಸಂಭ್ರಮದಿಂದ ನವ ಸಂವತ್ಸರವನ್ನು ಬರಮಾಡಿಕೊಳ್ಳುತ್ತಿದ್ದಾರೆ. ಚೈತ್ರಶುಕ್ಲ ಯುಗಾದಿ, ಗುಡಿಪಾಡ್ವಾ, ಚೇತಿ ಚಂದ್, ನವರೆಹ್ ಮತ್ತು ಸಾಜಿಬು ಚೈರೋಬಾ ಎಂಬ ವಿವಿಧ ಹೆಸರುಗಳಲ್ಲಿ ದೇಶಾದ್ಯಂತ ಹಬ್ಬವನ್ನು ಆಚರಿಸಲಾಗುತ್ತಿದೆ. ಹಬ್ಬದ ಮುನ್ನಾ ದಿನವಾದ ನಿನ್ನೆ ರಾಷ್ಟ್ರಪತಿ ದ್ರೌಪದಿ ಮುರ್ಮು ಜನತೆಗೆ ಶುಭಾಶಯ ಕೋರಿದ್ದಾರೆ. ವಸಂತ ಋತುವಿನ ಆರಂಭದಲ್ಲಿ ಆಚರಿಸಲಾಗುವ ಈ ಹಬ್ಬ ಭಾರತೀಯ ಹೊಸ ವರ್ಷದ ಆರಂಭವನ್ನು ಸಂಕೇತಿಸುತ್ತದೆ. ಈ ಆಚರಣೆ ಭಾರತದ ಸಾಂಸ್ಕೃತಿಕ ವೈವಿಧ್ಯತೆಯನ್ನು ಪ್ರದರ್ಶಿಸುತ್ತದೆ ಹಾಗೂ ಸಾಮಾಜಿಕ ಒಗ್ಗಟ್ಟನ್ನು ಉತ್ತೇಜಿಸುತ್ತದೆ. ಈ ಹಬ್ಬದ ಸಮಯದಲ್ಲಿ ಜನರು ಹೊಸ ಸುಗ್ಗಿಯ ಆನಂದವನ್ನು ಅನುಭವಿಸುತ್ತಾರೆ ಮತ್ತು ಪ್ರಕೃತಿಗೆ ತಮ್ಮ ಕೃತಜ್ಞತೆಯನ್ನು ವ್ಯಕ್ತಪಡಿಸುತ್ತಾರೆ ಎಂದು ತಮ್ಮ ಸಂದೇಶದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದ್ದಾರೆ.ಸಾಮರಸ್ಯ ಮತ್ತು ಏಕತೆಯ ಮನೋಭಾವನ್ನು ಬಲಪಡಿಸಲು ಹಾಗೂ ರಾಷ್ಟ್ರವನ್ನು ಹೊಸ ಎತ್ತರಕ್ಕೆ ಕೊಂಡಯ್ಯಲು ನವೀಕೃತ ಶಕ್ತಿಯೊಂದಿಗೆ ಕೆಲಸ ಮಾಡುವಂತೆ ಜನರಿಗೆ ಅವರು ಮನವಿ ಮಾಡಿದ್ದಾರೆ.

<><*<><>*><>

ಆಕಾಶವಾಣಿಯ ಜನಪ್ರಿಯ ಮಾಸಿಕ 'ಮನ್ ಕಿ ಬಾತ್' ಕಾರ್ಯಕ್ರಮದಲ್ಲಿ ಪ್ರಧಾನಮಂತ್ರಿ ನರೇಂದ್ರ ಮೋದಿ, ಇಂದು ಬೆಳಗ್ಗೆ ೧೧ ಗಂಟೆಗೆ ದೇಶ-ವಿದೇಶಗಳಲ್ಲಿರುವ ಭಾರತೀಯರೊಂದಿಗೆ ತಮ್ಮ ಮನದಾಳದ ಮಾತುಗಳನ್ನು ಹಂಚಿಕೊಳ್ಳಲಿದ್ದಾರೆ. ಇದು 'ಮನ್ ಕಿ ಬಾತ್' ಕಾರ್ಯಕ್ರಮದ ೧೨೦ನೇ ಆವೃತ್ತಿಯಾಗಿದೆ. ಈ ಕಾರ್ಯಕ್ರಮ ಆಕಾಶವಾಣಿ ಮತ್ತು ದೂರದರ್ಶನದ ಎಲ್ಲ ವಾಹಿನಿಗಳು, ಎಐಆರ್ ನ್ಯೂಸ್ ಜಾಲತಾಣ, ನ್ಯೂಸ್ ಆನ್ ಏರ್ ಮೊಬೈಲ್ ಆಪ್ಲಿಕೇಶನ್‌ನಲ್ಲಿ ಪ್ರಸಾರವಾಗಲಿದೆ. ಅಲ್ಲದೇ, ಎಐಆರ್ ನ್ಯೂಸ್, ಡಿಡಿ ನ್ಯೂಸ್, ಪ್ರಧಾನಮಂತ್ರಿ ಕಾರ್ಯಾಲಯ ಹಾಗೂ ಮಾಹಿತಿ ಮತ್ತು ಪ್ರಸಾರ ಸಚಿವಾಲಯದ ಯೂಟ್ಯೂಬ್ ವಾಹಿನಿಗಳಲ್ಲಿ ನೇರ ಪ್ರಸಾರವಾಗಲಿದೆ. ಹಿಂದಿ ಅವತರಣಿಕೆಯ ನಂತರ ಪ್ರಾದೇಶಿಕ ಭಾಷೆಗಳಲ್ಲಿ ಕಾರ್ಯಕ್ರಮ ಬಿತ್ತರವಾಗಲಿದೆ.

<><*<><>*><>

ಪ್ರಧಾನಿ ನರೇಂದ್ರ ಮೋದಿ ಇಂದು ಮಹಾರಾಷ್ಟ್ರ ಮತ್ತು ಛತ್ತೀಸ್‌ಗಢ ಪ್ರವಾಸ ಕೈಗೊಳ್ಳಲಿದ್ದಾರೆ. ಮೊದಲು ನಾಗ್ಪುರಕ್ಕೆ ಪ್ರಯಾಣಿಸಲಿರುವ ಪ್ರಧಾನಿ, ಬೆಳಗ್ಗೆ, ಸ್ಮೃತಿ ಮಂದಿರ, ಅನಂತರ ದೀಕ್ಷಾಭೂಮಿಗೆ ಭೇಟಿ ನೀಡಲಿದ್ದಾರೆ. ಮಾಧವ ನೇತ್ರಾಲಯ ಕೇಂದ್ರದ ಶಿಲಾನ್ಯಾಸ ನೆರವೇರಿಸಲಿರುವ ಅವರು, ಬಳಿಕ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಲಿದ್ದಾರೆ. ನಾಗ್ಪುರದಲ್ಲಿರುವ ಸೋಲಾರ್ ಡಿಫೆನ್ಸ್ ಮತ್ತು ಏರೋಸ್ಪೇಸ್ ಲಿಮಿಟೆಡ್‌ನಲ್ಲಿ ಲಾಯ್ಟರಿಂಗ್ ಮದ್ದುಗುಂಡು ಪರೀಕ್ಷಾ ಶ್ರೇಣಿ ಮತ್ತು ರನ್‌ವೇ ಸೌಲಭ್ಯವನ್ನು ಉದ್ಘಾಟಿಸಲಿದ್ದಾರೆ. ಪ್ರವಾಸದ ಎರಡನೇ ಚರಣದಲ್ಲಿ ಪ್ರಧಾನಿ ನೇಂದ್ರ ಮೋದಿ, ಛತ್ತೀಸ್‌ಗಢಕ್ಕೆ ಭೇಟಿ ನೀಡಲಿದ್ದು, ಬಿಲಾಸ್‌ಪುರದಲ್ಲಿ ೩೩ ಸಾವಿರದ ೭೦೦ ಕೋಟಿ ರೂಪಾಯಿಗೂ ಹೆಚ್ಚು ಮೌಲ್ಯದ ವಿದ್ಯುತ್, ತೈಲ ಮತ್ತು ಅನಿಲ, ರೈಲು, ರಸ್ತೆ, ಶಿಕ್ಷಣ ಮತ್ತು ವಸತಿ ಕ್ಷೇತ್ರಗಳಿಗೆ ಸಂಬಂಧಿಸಿದ ಬಹು ಅಭಿವೃದ್ಧಿ ಯೋಜನೆಗಳ ಶಂಕುಸ್ಥಾಪನೆ, ಹಾಗೂ ಲೋಕಾರ್ಪಣೆ ಮಾಡಲಿದ್ದಾರೆ.

ಬಿಲಾಸ್ಪುರ ಜಿಲ್ಲೆಯಲ್ಲಿ ೯ ಸಾವಿರದ ೭೯೦ ಕೋಟಿಗೂ ಹೆಚ್ಚು ಮೌಲ್ಯದ ಎನ್‌ಟಿಪಿಸಿಯ ಸೂಪರ್ ಥರ್ಮಲ್ ಪವರ್ ಪ್ರಾಜೆಕ್ಟ್ ಹಂತ-೩ ರ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಛತ್ತೀಸ್‌ಗಢದ ಕೊರಿಯಾ, ಸೂರಜ್‌ಪುರ, ಬಲರಾಂಪುರ ಮತ್ತು ಸುರ್ಗುಜಾ ಜಿಲ್ಲೆಗಳಲ್ಲಿ ಭಾರತ್ ಪೆಟ್ರೋಲಿಯಂ ಕಾರ್ಪೊರೇಷನ್ ಲಿಮಿಟೆಡ್ ಬಿಪಿಸಿಎಲ್‌ನ ನಗರ ಅನಿಲ ವಿತರಣಾ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

<><*<><>*><>

ಈ ಪ್ರದೇಶದಲ್ಲಿ ಸಂಪರ್ಕ ಸುಧಾರಿಸಲು, ೨ ಸಾವಿರದ ೬೯೦ ಕೋಟಿ ರೂಪಾಯಿಗಳಿಗೂ ಹೆಚ್ಚು ಮೌಲ್ಯದ ಒಟ್ಟು ೧೦೮ ಕಿಲೋಮೀಟರ್ ಉದ್ದದ ಏಳು ರೈಲ್ವೆ ಯೋಜನೆಗಳಿಗೆ ಪ್ರಧಾನಿ ಶಂಕುಸ್ಥಾಪನೆ ನೆರವೇರಿಸಲಿದ್ದಾರೆ. ಒಟ್ಟು ೧೧೧ ಕಿಲೋಮೀಟರ್ ಉದ್ದದ ಮೂರು ರೈಲ್ವೆ ಯೋಜನೆಗಳನ್ನು ರಾಷ್ಟ್ರಕ್ಕೆ ಸಮರ್ಪಿಸಲಿದ್ದಾರೆ. ರಾಜ್ಯದ ೨೯ ಜಿಲ್ಲೆಗಳಲ್ಲಿ ೧೩೦ ಪಿಎಂ-ಶ್ರೀ ಶಾಲೆಗಳು ಮತ್ತು ರಾಯ್‌ಪುರದಲ್ಲಿ ವಿದ್ಯಾ ಸಮಿಕ್ಷಾ ಕೇಂದ್ರಯನ್ನು ಲೋಕಾರ್ಪಣೆಗೊಳಿಸಲಿದ್ದಾರೆ. ಪಿಎಂ-ಶ್ರೀ ಯೋಜನೆಯಡಿಯಲ್ಲಿ ೧೩೦ ಶಾಲೆಗಳನ್ನು ಮೇಲ್ದರ್ಜೆಗೇರಿಸಲಾಗುತ್ತಿದೆ. ಇದರ ಜೊತೆಗೆ, ಪ್ರಧಾನಮಂತ್ರಿ ಆವಾಸ್ ಯೋಜನೆ - ಗ್ರಾಮೀಣ ಅಡಿಯಲ್ಲಿ ೩ ಲಕ್ಷ ಫಲಾನುಭವಿಗಳ ಗೃಹ ಪ್ರವೇಶ

ನಡೆಯಲಿದ್ದು, ಈ ಯೋಜನೆಯಡಿಯಲ್ಲಿ ಕೆಲವು ಫಲಾನುಭವಿಗಳಿಗೆ ಪ್ರಧಾನಿ ನರೇಂದ್ರ ಮೋದಿ ಅವರು ಮನೆ ಕೀಲಿಗಳನ್ನು ಹಸ್ತಾಂತರಿಸಲಿದ್ದಾರೆ.

<><*<><>*><>

'ಪ್ರಧಾನಮಂತ್ರಿ ವಿಕಾಸ್ ಕೌಶಲ್ಯ ಅಭಿವೃದ್ಧಿ' ಉಪಕ್ರಮಕ್ಕೆ, ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವ ಕಿರಣ್ ರಿಜಿಜು ನಿನ್ನೆ ನವದೆಹಲಿಯಲ್ಲಿ ಚಾಲನೆ ನೀಡಿದರು. ಕೌಶಲ್ಯ ತರಬೇತಿ ಮತ್ತು ಶೈಕ್ಷಣಿಕ ಬೆಂಬಲಕ್ಕಾಗಿ ಸಾವಿರಾರು ಅಭ್ಯರ್ಥಿಗಳನ್ನು ಸಬಲೀಕರಣಗೊಳಿಸುವ ಉದ್ದೇಶವನ್ನು ಈ ಉಪಕ್ರಮ ಹೊಂದಿದೆ. ಈ ಕಾರ್ಯಕ್ರಮವನ್ನು ದೆಹಲಿ ಸಿಖ್ ಗುರುದ್ವಾರ ನಿರ್ವಹಣಾ ಸಮಿತಿ-ಡಿ.ಎಸ್.ಜಿ.ಎಂ.ಸಿ ಜಾರಿಗೊಳಿಸಲಿದೆ.  ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವ ರಿಜಿಜು, ೩೧ ಸಾವಿರದ ೬೦೦ ಯುವಕರು ಈ ಉಪಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಘೋಷಿಸಿದರು.  ಈ ಯೋಜನೆ ಕೃತಕ ಬುದ್ಧಿಮತ್ತೆ, ಮಾಹಿತಿ ವಿಜ್ಞಾನ, ೫ಜಿ ದೂರಸಂಪರ್ಕ, ಆಗ್ಮೆಂಟೆಡ್ ಮತ್ತು ವರ್ಚುವಲ್ ವಾಸ್ತವತೆ, ಗ್ರಾಫಿಕ್ ವಿನ್ಯಾಸ ಮತ್ತು ಸೌರ ದ್ಯುತಿವಿದ್ಯುತ್ ಜನಕ ಸ್ಥಾಪನೆ ಸೇರಿದಂತೆ ಭವಿಷ್ಯದ ಬೇಡಿಕೆಗಳಿಗೆ ಅನುಗುಣವಾಗಿ ಕೌಶಲ್ಯಗಳಲ್ಲಿ ತರಬೇತಿ ನೀಡುವ ಗುರಿಯನ್ನು ಹೊಂದಿದೆ ಎಂದು ಅವರು ವಿವರಿಸಿದರು.  ೧೦೦ ಕೋಟಿ ರೂಪಾಯಿಗಳ ಆಯವ್ಯಯದೊಂದಿಗೆ ಈ ಉಪಕ್ರಮವು ಸಿಖ್ ಸಮುದಾಯದ ಯುವಕರ ತರಬೇತಿ ಮತ್ತು ಕೌಶಲ್ಯ ವರ್ಧನೆಗೆ ಗಮನಾರ್ಹವಾಗಿ ಕೊಡುಗೆ ನೀಡುತ್ತದೆ ಎಂದು ಸಚಿವ ಕಿರಣ್ ರಿಜಿಜು ತಿಳಿಸಿದರು.

<><*<><>*><>

ಭೂಕಂಪ ಪೀಡಿತ ಮ್ಯಾನ್ಮಾರ್‌ನ ಯಾಂಗೋನ್ ಮತ್ತು ನೇ ಪೈ ಟಾವ್‌ನಲ್ಲಿ 'ಆಪರೇಷನ್ ಬ್ರಹ್ಮ' ಕಾರ್ಯಾಚರಣೆಯ ಭಾಗವಾಗಿ ಭಾರತೀಯ ವಾಯುಪಡೆಯ ಐದು ವಿಮಾನಗಳು ತಲುಪಿವೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ಈ ವಿಮಾನಗಳು ಮಾನವೀಯ ನೆರವು ಮತ್ತು ವಿಪತ್ತು ಪರಿಹಾರ ಸಾಮಗ್ರಿಗಳು, ೬೦ ಪ್ಯಾರಾ ಫೀಲ್ಡ್ ಆಂಬ್ಯುಲೆನ್ಸ್ ಮತ್ತು ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ-ಎನ್‌ಡಿಆರ್‌ಎಫ್ ಸಿಬ್ಬಂದಿಯನ್ನು ಹೊತ್ತೊಯ್ದಿವೆ. ಎರಡು ಅ-೧೭ ವಿಮಾನಗಳು, ೬೦ ಪ್ಯಾರಾ ಫೀಲ್ಡ್ ಆಂಬ್ಯುಲೆನ್ಸ್, ಎನ್‌ಡಿಆರ್‌ಎಫ್ ತಂಡ ಹಾಗೂ ೧೦ ಟನ್ ಪರಿಹಾರ ಸಾಮಗ್ರಿಗಳೊಂದಿಗೆ ನೇ ಪೈ ಟಾವ್‌ಗೆ ತಲುಪಿದೆ. ಭೂಕಂಪದ ನಂತರ ಇನ್ನೂ ಸಂಪೂರ್ಣವಾಗಿ ಕಾರ್ಯನಿರ್ವಹಿಸದ ರಾಜಧಾನಿಯ ವಿಮಾನ ನಿಲ್ದಾಣಕ್ಕೆ ರಕ್ಷಣಾ ಸಿಬ್ಬಂದಿಯನ್ನು ಕರೆತಂದ ಮೊದಲ ದೇಶ ಭಾರತವಾಗಿದೆ. ಎನ್‌ಡಿಆರ್‌ಎಫ್ ತಂಡವು ಕಾರ್ಯಾಚರಣೆಗಾಗಿ ಇಂದು ಮಂಡಲೆ ನಗರಕ್ಕೆ ತೆರಳಲಿದೆ. ವಾಯುಪಡೆಗಳು ಮತ್ತು ನೌಕಾಪಡೆಯ ಹಡಗುಗಳು ಕಳುಹಿಸಿದ ಒಟ್ಟು ಸಹಾಯವು ೧೩೭ ಟನ್‌ಗಳಷ್ಟಿದ್ದು, ಅಗತ್ಯವಿರುವಂತೆ ಹೆಚ್ಚಿನ ಸಹಾಯವನ್ನು ಕಳುಹಿಸಲಾಗುವುದು ಎಂದು ಭಾರತೀಯ ಮೂಲಗಳು ದೃಢಪಡಿಸಿವೆ. ಭೂಕಂಪ ಪೀಡಿತ ಮ್ಯಾನ್ಮಾರ್‌ಗೆ ಆಪರೇಷನ್ ಬ್ರಹ್ಮ ಅಡಿಯಲ್ಲಿ ತುರ್ತು ಮಾನವೀಯ ನೆರವು ನೀಡಲು ಭಾರತೀಯ ಸೇನೆಯು ವಿಶೇಷ ವೈದ್ಯಕೀಯ ಕಾರ್ಯಪಡೆಯನ್ನು ನಿಯೋಜಿಸಿದೆ. ೧೧೮ ಸದಸ್ಯರ ಶತ್ರುಜೀತ್ ಬ್ರಿಗೇಡ್ ವೈದ್ಯಕೀಯ ತಂಡವು ವೈದ್ಯಕೀಯ ನೆರವು ನೀಡಲಿದೆ ಎಂದು ರಕ್ಷಣಾ ಸಚಿವಾಲಯ ಹೇಳಿಕೆಯಲ್ಲಿ ತಿಳಿಸಿದೆ. ಈ ಮಾನವೀಯ ನೆರವು ಭಾರತದ 'ನೆರೆಹೊರೆಯವರು ಮೊದಲು' ನೀತಿ ಮತ್ತು 'ವಸುಧೈವ ಕುಟುಂಬಕಂ' ಎಂಬ ನೀತಿಗೆ ಬದ್ಧತೆಯನ್ನು ಒತ್ತಿಹೇಳುತ್ತದೆ.

<><*<><>*><>

ಮ್ಯಾನ್ಮಾರ್‌ನಲ್ಲಿ ಸಂಭವಿಸಿದ್ದ ೭.೭ ತೀವ್ರತೆಯ ಪ್ರಬಲ ಭೂಕಂಪದ ಪರಿಣಾಮ ಮೃತಪಟ್ಟವರ ಸಂಖ್ಯೆ ೧ ಸಾವಿರದ ೬೪೪ ಕ್ಕೆ ಏರಿಕೆಯಾಗಿದೆ. ಗಾಯಗೊಂಡವರ ಸಂಖ್ಯೆ ೩ ಸಾವಿರದ ೪೦೮ ಕ್ಕೂ ಹೆಚ್ಚಾಗಿದೆ ಎಂದು ದೇಶದ ಮಿಲಿಟರಿ ನೇತೃತ್ವದ ಸರ್ಕಾರ ಘೋಷಿಸಿದೆ. ೧೩೯ ಜನರು ಇನ್ನೂ ಕಾಣೆಯಾಗಿದ್ದು, ವಿವರವಾದ ಅಂಕಿಅಂಶಗಳನ್ನು ಇನ್ನೂ ಸಂಗ್ರಹಿಸಲಾಗುತ್ತಿರುವುದರಿಂದ ಸಂಖ್ಯೆಗಳು ಹೆಚ್ಚಾಗಬಹುದಾಗಿದೆ ಎಂದು ತಿಳಿಸಿದೆ. ಮ್ಯಾನ್ಮಾರ್‌ನ ಎರಡನೇ ಅತಿದೊಡ್ಡ ನಗರ ಮತ್ತು ಭೂಕಂಪದ ಕೇಂದ್ರಬಿಂದುವಿಗೆ ಹತ್ತಿರವಿರುವ ಮಂಡಲೇಯಲ್ಲಿ ಹೆಚ್ಚಿನ ಸಾವುನೋವುಗಳು ಸಂಭವಿಸಿವೆ. ಏತನ್ಮಧ್ಯೆ, ಪರಿಹಾರ ಪ್ರಯತ್ನಗಳನ್ನು ಬೆಂಬಲಿಸಲು ಮ್ಯಾನ್ಮಾರ್‌ನ ನೆರಳು ರಾಷ್ಟ್ರೀಯ ಏಕತಾ ಸರ್ಕಾರ, ಭೂಕಂಪ ಪೀಡಿತ ಪ್ರದೇಶಗಳಲ್ಲಿ ಎರಡು ವಾರಗಳ ಕದನ ವಿರಾಮವನ್ನು ಘೋಷಿಸಿದೆ. ಅದರ ಸಶಸ್ತ್ರ ವಿಭಾಗವಾದ ಪೀಪಲ್ಸ್ ಡಿಫೆನ್ಸ್ ಫೋರ್ಸ್, ಭೂಕಂಪ ಪೀಡಿತ ಪ್ರದೇಶಗಳಲ್ಲಿ ಭಾನುವಾರದಿಂದ ಎರಡು ವಾರಗಳ ಆಕ್ರಮಣಕಾರಿ ಮಿಲಿಟರಿ ಕಾರ್ಯಾಚರಣೆಯಲ್ಲಿ ವಿರಾಮವನ್ನು ಜಾರಿಗೆ ತರಲಿದೆ ಎಂದು ಓUಉ ಹೇಳಿದೆ.

<><*<><>*><>

ಅಹಮದಾಬಾದ್‌ನ ನರೇಂದ್ರ ಮೋದಿ ಕ್ರೀಡಾಂಗಣದಲ್ಲಿ ಕಳೆದ ರಾತ್ರಿ ನಡೆದ ಇಂಡಿಯನ್ ಪ್ರೀಮಿಯರ್ ಲೀಗ್- ಐಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯದಲ್ಲಿ ಗುಜರಾತ್ ಟೈಟಾನ್ಸ್, ಮುಂಬೈ ಇಂಡಿಯನ್ಸ್ ತಂಡವನ್ನು ೩೬ ರನ್‌ಗಳಿಂದ ಪರಾಭವಗೊಳಿಸಿದೆ. ಮೊದಲು ಬ್ಯಾಟಿಂಗ್ ಮಾಡಿದ ಗುಜರಾತ್ ಟೈಟಾನ್ಸ್ ತಂಡ, ನಿಗದಿತ ೨೦ ಓವರ್‌ಗಳಲ್ಲಿ ೮ ವಿಕೆಟ್ ನಷ್ಟಕ್ಕೆ ೧೯೬ ರನ್ ಗಳಿಸಿತು. ಗುಜರಾತ್ ಪರ ಸಾಯಿ ಸುದರ್ಶನ್ ೬೩ ರನ್ ಗಳಿಸಿದರು. ಮುಂಬೈ ಪರ ಹಾರ್ದಿಕ್ ಪಾಂಡ್ಯ ೨ ವಿಕೆಟ್ ಪಡೆದರು. ಇದಕ್ಕೆ ಉತ್ತರವಾಗಿ, ಮುಂಬೈ ಇಂಡಿಯನ್ಸ್ ತಂಡ. ೨೦ ಓವರ್‌ಗಳಲ್ಲಿ ೬ ವಿಕೆಟ್‌ಗಳ ನಷ್ಟಕ್ಕೆ ೧೬೦ ರನ್ ಗಳಿಸಲಷ್ಟೇ ಶಕ್ತವಾಯಿತು. ಮುಂಬೈ ಪರ ಸೂರ್ಯಕುಮಾರ್ ಯಾದವ್ ೪೮ ರನ್ ಮಾಡಿದರು. ಗುಜರಾತ್ ಪರ ಮೊಹಮ್ಮದ್ ಸಿರಾಜ್ ಮತ್ತು ಪ್ರಸಿದ್ಧ್ ಕೃಷ್ಣ ತಲಾ ೨ ವಿಕೆಟ್ ಕಬಳಿಸಿದರು. ಇಂದು ಎರಡು ಪಂದ್ಯಗಳು ನಡೆಯಲಿದ್ದು, ವಿಶಾಖಪಟ್ಟಣದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ತಂಡ, ಸನ್‌ರೈಸರ್ಸ್ ಹೈದರಾಬಾದ್ ತಂಡವನ್ನು ಎದುರಿಸಲಿದೆ. ಪಂದ್ಯ ಮಧ್ಯಾಹ್ನ ೩.೩೦ ಕ್ಕೆ ಆರಂಭವಾಗಲಿದೆ. ಗುವಾಹಟಿಯಲ್ಲಿ ರಾತ್ರಿ ೭:೩೦ ಕ್ಕೆ ನಡೆಯಲಿರುವ ಮತ್ತೊಂದು ಪಂದ್ಯದಲ್ಲಿ ರಾಜಸ್ಥಾನ್ ರಾಯಲ್ಸ್ ಹಾಗೂ ಚೆನ್ನೈ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಲಿವೆ.

<><*<><>*><>

ಟೇಬಲ್ ಟೆನಿಸ್ ಆಟಗಾರ ಮಾನವ್ ಠಕ್ಕರ್, ವಿಶ್ವ ಟೇಬಲ್ ಟೆನಿಸ್-ಡಬ್ಲ್ಯುಟಿಟಿ ನ ತಾರಾ ಸ್ಪರ್ಧೆ ವಿಭಾಗದಲ್ಲಿ ಸೆಮಿಫೈನಲ್ ತಲುಪಿದ ಮೊದಲ ಭಾರತೀಯ ಎಂಬ ಹೆಗ್ಗಳಿಕೆಗೆ ಪಾತ್ರರಾಗುವ ಮೂಲಕ ಇತಿಹಾಸ ನಿರ್ಮಿಸಿದ್ದಾರೆ. ಚೆನ್ನೈನಲ್ಲಿ ನಿನ್ನೆ ನಡೆದ ಸ್ಪರ್ಧೆಯಲ್ಲಿ ಠಕ್ಕರ್, ಒಲಿಂಪಿಕ್ ಮತ್ತು ವಿಶ್ವ ಪದಕ ವಿಜೇತ ದಕ್ಷಿಣ ಕೊರಿಯಾದ ಲಿಮ್ ಜೊಂಗ್ಹೂನ್ ವಿರುದ್ಧ ೩-೨ ಅಂತರದ ರೋಮಾಂಚಕ ಗೆಲುವು ಸಾಧಿಸಿದರು. ಇದಕ್ಕೂ ಮೊದಲು, ಅವರು ಪ್ರಿ-ಕ್ವಾರ್ಟರ್ ಫೈನಲ್‌ನಲ್ಲಿ ಜರ್ಮನಿಯ ಆಂಡ್ರೆ ಬರ್ಟೆಲ್ಸ್‌ಮಿಯರ್ ಅವರನ್ನು ೩-೨ ಅಂತರದಿಂದ ಪರಾಭವಗೊಳಿಸಿದ್ದರು. ಈ ಸಾಧನೆಯು ಭಾರತೀಯ ಟೇಬಲ್ ಟೆನ್ನಿಸ್‌ಗೆ ಮಹತ್ವದ ಮೈಲಿಗಲ್ಲಾಗಿದ್ದು, ಅಂತರಾಷ್ಟ್ರೀಯ ವೇದಿಕೆಯಲ್ಲಿ ಠಕ್ಕರ್ ಅವರ ಕೌಶಲ್ಯವನ್ನು ಬಿಂಬಿಸುತ್ತದೆ.

**<><*<>** ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು **<>*><>**

**<><*<>** ನಮ್ಮ ಮುಂದಿನ ವಾರ್ತಾ ಪ್ರಸಾರ ಮಧ್ಯಾಹ್ನ ೧೨ ಕ್ಕೆ **<>*><>**